## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ: ಸಕಇ 89 ಎಸ್‌ಡಿಸಿ 2008, ದಿನಾಂಕ:31-08-2012.

2) ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಅಂಅನಿ/ ಸಿಆ-01/ 156/14-15/2015-16/13205, ದಿನಾಂಕ:06-11-2015.

ಪ್ರಸ್ತಾವನೆ:-

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಖಾಲಿ ಇರುವ 97 ಹುದ್ದೆಗಳನ್ನು ಭರ್ತಿ ಮಾಡಲು ಮಂಜೂರಾತಿ ನೀಡಲಾಗಿತ್ತು. ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ 111 ವಿವಿಧ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕೋರಿರುತ್ತಾರೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ, ಆರ್ಥಿಕ ಇಲಾಖೆಗೆ ಸಹಮತಿಗಾಗಿ ಸಲ್ಲಿಸಿದ್ದು, ಈಗ ಸಹಮತಿ ನೀಡಿರುತ್ತಾರೆ. ಆದ್ದರಿಂದ ಈ ಕೆಳಕಂಡಂತೆ ಸರ್ಕಾರದ ಆದೇಶ ಹೊರಡಿಸಲು ನಿರ್ಧರಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 168 ಎಸ್‌ಡಿಸಿ 2015,
ಬೆಂಗಳೂರು, ದಿನಾಂಕ:13/06/2016.

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮದಲ್ಲಿ ಖಾಲಿ ಇರುವ ಹುದ್ದೆಗಳನ್ನು ಈ ಕೆಳಕಂಡಂತೆ ನೇರ ನೇಮಕಾತಿ ಮೂಲಕ ಸದರಿ ನಿಗಮದ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

| ಕ್ರ.ಸಂ | ಹುದ್ದೆಗಳ ವಿವರ | ಭರ್ತಿ ಮಾಡಲು ಅನುಮತಿಸಿದ ಹುದ್ದೆಗಳ ಸಂಖ್ಯೆ | ಷರಾ |
|---|---|---|---|
| 1. | ಜಿಲ್ಲಾ ವ್ಯವಸ್ಥಾಪಕರು | 03 | ನಿಗಮದ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 2. | ಸಹಾಯಕ ಜಿಲ್ಲಾ ವ್ಯವಸ್ಥಾಪಕರು | 03 | |
| 3. | ತಾಲ್ಲೂಕು ಅಭಿವೃದ್ಧಿ ಅಧಿಕಾರಿ | 44 | |
| 4. | ಲೆಕ್ಕ ಸಹಾಯಕರು | 18 | |
| 5. | ಪ್ರಥಮ ದರ್ಜೆ ಸಹಾಯಕರು | 02 | |
| 6. | ಶೀಘ್ರಲಿಪಿಗಾರರು | 02 | |
| 7. | ದ್ವಿತೀಯ ದರ್ಜೆ ಸಹಾಯಕರು ಹಾಗೂ ಕಂಪ್ಯೂಟರ್ ಆಪರೇಟರ್ | 08 | |
| 8. | ಕಂಪ್ಯೂಟರ್ ಆಪರೇಟರ್ ಹಾಗೂ ಬೆರಳಚ್ಚುಗಾರರು | 16 | ಹೊರ ಗುತ್ತಿಗೆ ಆಧಾರದ ಮೇಲೆ |
| 9. | ವಾಹನ ಚಾಲಕರು | 09 | |
| 10. | ದಲಾಯತ್ | 06 | |
| | ಒಟ್ಟು | 111 | |

ಪು.ತಿ.ನೋ

ಮೇಲ್ಕಂಡ ಹುದ್ದೆಗಳನ್ನು ಮೀಸಲಾತಿ ನಿಯಮಗಳಂತೆ ಮತ್ತು ಹೈದರಾಬಾದ್-ಕರ್ನಾಟಕ 371 (ಜೆ) ರನ್ವಯ ಹುದ್ದೆಗಳನ್ನು ವಿಂಗಡಿಸಿ ಚಾಲ್ತಿಯಲ್ಲಿರುವ ನಿಗಮದ ವೃಂದ ಮತ್ತು ನೇಮಕಾತಿ ನಿಯಮಗಳಂತೆ ನೇರ ನೇಮಕಾತಿ ಮೂಲಕ ಭರ್ತಿ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 306 ವೆಚ್ಚ -3/2016, ದಿನಾಂಕ:11-05-2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಕೆ.ವಿ. ರಾಮ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:-

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
3. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
4. ಅಧ್ಯಕ್ಷರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ,
6. ಸರ್ಕಾರದ ಜಂಟಿ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.